ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021-22 ದಿನಾಂಕ : 04-10-2021

# ಪತ್ರಿಕಾ ಪ್ರಕಟಣೆ

**PRESS RELEASE**

## ರಾಜ್ಯದಲ್ಲಿ ದಾಖಲೆ ಪ್ರಮಾಣದ 158.73 ಲಕ್ಷ ಮೆಟ್ರಿಕ್ ಟನ್ ಆಹಾರ ಧಾನ್ಯ ಉತ್ಪಾದನೆ
**– ಸಚಿವ ಬಿ.ಸಿ.ಪಾಟೀಲ್**

ಬೆಂಗಳೂರು, ಅಕ್ಟೋಬರ್ 04, (ಕರ್ನಾಟಕ ವಾರ್ತೆ) :

2020-21ನೇ ಸಾಲಿನಲ್ಲಿ ದಾಖಲೆ ಪ್ರಮಾಣದ 158.73 ಲಕ್ಷ ಮೆಟ್ರಿಕ್ ಟನ್ ಆಹಾರ ಧಾನ್ಯಗಳ ಉತ್ಪಾದನೆಯಾಗಿದ್ದು, ಇದು ದೇಶದ ಸರಾಸರಿಗೆ ಹೋಲಿಸಿದಲ್ಲಿ ಶೇ. 2ರಷ್ಟು ಹಾಗೂ ರಾಜ್ಯದ ಸರಾಸರಿಗೆ ಹೋಲಿಸಿದಲ್ಲಿ ಶೇ.10ರಷ್ಟು ಹೆಚ್ಚಿನ ಉತ್ಪಾದನೆಯಾಗಿದೆ ಎಂದು ಕೃಷಿ ಸಚಿವ ಬಿ.ಸಿ.ಪಾಟೀಲ್ ಅವರು ತಿಳಿಸಿದರು.

ಇಂದು ಜಿಕೆವಿಕೆಯ ಕುವೆಂಪು ಸಭಾಂಗಣದಲ್ಲಿ ಕರೆಯಲಾದ ಪತ್ರಿಕಾಗೋಷ್ಠಿಯಲ್ಲಿ ಮಾಧ್ಯಮದವರೊಂದಿಗೆ ಪ್ರತಿಕ್ರಿಯಿಸಿದ ಸಚಿವರು ರಾಜ್ಯದಲ್ಲಿ 2021ರ ಮುಂಗಾರು ಹಂಗಾಮಿನ 2.50 ಲಕ್ಷ ಹೆಕ್ಟೇರ್‌ನಲ್ಲಿ ಪ್ರಮುಖ ಬೆಳೆಗಳಾದ ಭತ್ತ, ಮೆಕ್ಕೆಜೋಳ, ಜೋಳ, ಸೋಯಾ, ಅವರೆ, ಹೆಸರು, ಉದ್ದು, ತೊಗರಿ, ಶೇಂಗಾ, ಹತ್ತಿ, ಕಬ್ಬು, ಅವರೆ, ಸಜ್ಜೆ, ಸೂರ್ಯಕಾಂತಿ, ರಾಗಿ ಬೆಳೆಗಳು ಹಾನಿಯಾಗಿವೆ ಎಂದು ತಿಳಿಸಿದರು.

ಮುಂಗಾರು ಹಂಗಾಮಿನಲ್ಲಿ ಶೇ.77.00 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ ಹೊಂದಿದ್ದು, ಶೇ.77.20 ಲಕ್ಷ ಹೆಕ್ಟೇರ್ ಬಿತ್ತನೆ ಮಾಡಲಾಗಿದ್ದು, ಒಟ್ಟಾರೆ ಶೇ.100.26 ಬಿತ್ತನೆ ಮಾಡಲಾಗಿದೆ. ಮುಂಗಾರು ಹಂಗಾಮಿನಲ್ಲಿ 6.000ಲಕ್ಷ ಕ್ವಿಂಟಾಲ್ ಬಿತ್ತನೆಬೀಜ ಬೇಡಿಕೆಯಿದ್ದು, 7.70 ಲಕ್ಷ ಲಭ್ಯವಿದೆ. ಅದರಲ್ಲಿ 4.13 ಲಕ್ಷ ಕ್ವಿಂಟಾಲ್ ವಿತರಣೆ ಮಾಡಲಾಗಿದೆ. ಹಿಂಗಾರು ಹಂಗಾಮಿನಲ್ಲಿ 3.53 ಲಕ್ಷ ಕ್ವಿಂಟಾಲ್ ಬೇಡಿಕೆಯಿದ್ದು, 4.44 ಲಕ್ಷ ಕ್ವಿಂಟಾಲ್ ಲಭ್ಯವಿದೆ. ಅದರಲ್ಲಿ 16237.76 ಕ್ವಿಂಟಾಲ್ ವಿತರಿಸಲಾಗಿದೆ ಎಂದು ಹೇಳಿದರು.

2020-21ನೇ ಸಾಲಿನಲ್ಲಿ ಸುಮಾರು 256.77 ಲಕ್ಷ ತಾಕುಗಳಲ್ಲಿ ಬೆಳೆ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಬೇಕಾಗಿದ್ದು, ಪ್ರಸ್ತುತ ದಿನದವರೆಗೆ (01-10-2021 ರಂತೆ) ಒಟ್ಟು 228.05ಲಕ್ಷ ತಾಕುಗಳ (ಶೇ.88.81) (ಪೂರ್ವ ಮುಂಗಾರು ಹಂಗಾಮುಗಳು ಒಳಗೊಂಡಂತೆ) ಬೆಳೆ ಸಮೀಕ್ಷೆಯನ್ನು ಕೈಗೊಳ್ಳಲಾಗಿದೆ. 2021-22ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್‌ಬೀಮಾ ಯೋಜನೆಯಡಿ 12.80 ಲಕ್ಷ ರೈತರು ಬೆಳೆ ವಿಮೆಗೆ ನೋಂದಾಯಿಸಿರುತ್ತಾರೆ. ಒಟ್ಟು 36 ಬೆಳೆಗಳನ್ನು ಅಧಿಸೂಚಿಸಲಾಗಿರುತ್ತದೆ ಎಂದು ತಿಳಿಸಿದರು.

ಗ್ರಾಮೀಣ ಭಾಗಗಳಲ್ಲಿ ಉನ್ನತ ಶಿಕ್ಷಣ ಸೌಲಭ್ಯಗಳು ಕಡಿಮೆ ಇರುವುದರಿಂದ ಮತ್ತು ಅವರು ನಗರ ಪ್ರದೇಶಗಳಿಗೆ ಹೋದಾಗ ಶಿಕ್ಷಣದ ವೆಚ್ಚ ಹೆಚ್ಚಾಗುತ್ತದೆ. ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುವ ರೈತರ ಮಕ್ಕಳನ್ನು ಕೇಂದ್ರೀಕರಿಸಿ, ಅವರಿಗೆ ಉತ್ತೇಜನ ನೀಡಲು, ಗ್ರಾಮೀಣ ಭಾಗದಲ್ಲಿನ ಮಕ್ಕಳ ಶಿಕ್ಷಣವನ್ನು ಪ್ರೋತ್ಸಾಹಿಸಲು ಮುಖ್ಯಮಂತ್ರಿ ರೈತ ವಿದ್ಯಾ ನಿಧಿ ಕಾರ್ಯಕ್ರಮವನ್ನು ಆರಂಭಿಸಲಾಗಿದ್ದು, ಇದುವರೆವಿಗೂ 8931 ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗಳಿಗೆ ಬರೂ.2.44 ಕೋಟಿ ವಿದ್ಯಾರ್ಥಿವೇತನವನ್ನು ಡಿಬಿಟಿ ಮುಖಾಂತರ ವರ್ಗಾಯಿಸಲಾಗಿದೆ ಎಂದರು.

2019-20ನೇ ಸಾಲಿನಲ್ಲಿ 2.45 ಲಕ್ಷ, 2020-21ನೇ ಸಾಲಿನಲ್ಲಿ 7.46 ಲಕ್ಷ ಟಾರ್ಪಾಲಿನ್‌ಗಳನ್ನು ವಿತರಿಸಲಾಗಿದೆ. 695 ಕೃಷಿ ಯಂತ್ರಧಾರೆ ಕೇಂದ್ರಗಳ ಸ್ಥಾಪನೆ ಮಾಡಲಾಗಿದೆ. 210 ಕೃಷಿ ಯಂತ್ರೋಪಕರಣಗಳ ಬ್ಯಾಂಕ್‌ಗಳ ಸ್ಥಾಪನೆ ಮಾಡಲಾಗಿದೆ. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಇಲ್ಲಿಯವರೆಗೆ ಕೇಂದ್ರ ಸರ್ಕಾರದಿಂದ 53,77,682 ಫಲಾನುಭವಿ ರೈತರು ಆರ್ಥಿಕ ನೆರವು ಪಡೆದಿದ್ದಾರೆ. ರಾಜ್ಯ ಸರ್ಕಾರದಿಂದ 49,18,986 ಫಲಾನುಭವಿ ರೈತರು ಆರ್ಥಿಕ ನೆರವು ಪಡೆದಿದ್ದಾರೆ.

ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನದಡಿ ಮುಂಗಾರು ಹಂಗಾಮಿಗೆ ತೊಗರಿ, ಹೆಸರು, ಶೇಂಗಾ, ಸೋಯಾಅವರೆ ಮತ್ತು ಹಿಂಗಾರು ಹಂಗಾಮಿಗೆ ಶೇಂಗಾ ಮತ್ತು ಕುಸುಬೆ ಬೆಳೆಗಳ ವಿಸ್ತೀರ್ಣ ಹಾಗೂ ಉತ್ಪಾದನೆ ಹೆಚ್ಚಿಸುವ ನಿಟ್ಟಿನಲ್ಲಿ ಉತ್ತೇಜನ ನೀಡಲು ಬಿತ್ತನೆ ಬೀಜವನ್ನು ಮಿನಿಕಿಟ್ ರೂಪದಲ್ಲಿ ಉಚಿತವಾಗಿ ರೈತರಿಗೆ ಪ್ರಮುಖವಾಗಿ ಬೆಳೆಯುವ 20 ಜಿಲ್ಲೆಗಳಲ್ಲಿ ವಿತರಿಸಲು ಕಾರ್ಯತಂತ್ರ ರೂಪಿಸಲಾಗಿದೆ ಎಂದರು.

ಗುಣ ನಿಯಂತ್ರಣ-ವಿಚಕ್ಷಣಾ ದಳ 1394 ಕ್ವಿಂಟಾಲ್ ಪ್ರಮಾಣದ ರೂ. 416.78 ಲಕ್ಷ ಮೌಲ್ಯದ ಬಿತ್ತನೆ ಬೀಜಗಳನ್ನು ಜಪ್ತಿ ಮಾಡಲಾಗಿದೆ. 803.9 ಟನ್ ಪ್ರಮಾಣದ ರೂ. 145.32 ಲಕ್ಷ ಮೌಲ್ಯದ ರಸಗೊಬ್ಬರಗಳನ್ನು ಜಪ್ತಿ ಮಾಡಲಾಗಿದೆ.

5724ಲೀ ಮತ್ತು 4592ಕೆ.ಜಿ ಪ್ರಮಾಣದ ರೂ.64.06 ಲಕ್ಷ ಪೀಡೆನಾಶಕಗಳನ್ನು ಜಪ್ತಿ ಮಾಡಲಾಗಿದೆ. ಒಟ್ಟಾರೆಯಾಗಿ 2021-22ನೇ ಸಾಲಿನಲ್ಲಿ ರೂ.626.16ಲಕ್ಷ ಮೌಲ್ಯದ ವಿವಿಧ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಪೀಡೆನಾಶಕಗಳನ್ನು ವಿವಿಧ ಜಿಲ್ಲೆಗಳಲ್ಲಿ ಜಪ್ತಿ ಮಾಡಲಾಗಿದೆ.2020-21ನೇ ಸಾಲಿನಲ್ಲಿ ರೂ.1731.63 ಲಕ್ಷ ಮವಲ್ಯದ ವಿವಿಧ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಪೀಡೆನಾಶಕಗಳನ್ನು ವಿವಿಧ ಜಿಲ್ಲೆಗಳಲ್ಲಿ ಜಪ್ತಿ ಮಾಡಿ 69 ಮೊಕದ್ದಮೆಗಳನ್ನು ನ್ಯಾಯಾಲಯದಲ್ಲಿ ಹೂಡಲಾಗಿದೆ ಎಂದು ಹೇಳಿದರು.

2023ರವೇಳೆಗೆ ರಾಜ್ಯದಲ್ಲಿ ರೈತರ ಆದಾಯ ದ್ವಿಗುಣಗೊಳಿಸುವ ಕುರಿತು ಪರಾಮರ್ಶಿಸುವ ಸಲುವಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ. ರೈತರ ಆದಾಯ ದ್ವಿಗುಣಗೊಳಿಸುವ ಕುರಿತು ಸಮಗ್ರ ಕೃಷಿ ಪದ್ಧತಿಯ ವಿಸ್ತರಣೆ ಹಾಗೂ ಜನಪ್ರಿಯತೆ ಕಾರ್ಯಕ್ರಮವನ್ನು ಅಳವಡಿಸಲು ಆರ್‌ಕೆವಿವೈ ಯೋಜನೆಯಡಿ ರೂ.72.34 ಕೋಟಿಗಳ ಅನುದಾನವನ್ನು ಒದಗಿಸಲಾಗಿದ್ದು 2 ವರ್ಷಗಳಲ್ಲಿ ರಾಜ್ಯದ ಎಲ್ಲಾ ಗ್ರಾಮಪಂಚಾಯಿತಿಗಳಲ್ಲಿ (6027) ಸಮಗ್ರ ಕೃಷಿ ಪದ್ಧತಿಯ ಮಾದರಿಯನ್ನು ಅನುಷ್ಠಾನಗೊಳಿಸಲಾಗುವುದು ಎಂದು ತಿಳಿಸಿದರು.

ಕೇಂದ್ರ ಪುರಸ್ಕೃತ ಯೋಜನೆಯಡಿಯಲ್ಲಿ ಕೊಯ್ಲಿನೋತ್ತರ ನಿರ್ವಹಣೆಗಾಗಿ ಮೂಲಭೂತ ಸೌಕರ್ಯಗಳನ್ನು ಸೃಷ್ಟಿಸಲು ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲದ ಬಡ್ಡಿಗೆ ಶೇ.3ರ ಸಹಾಯಧನ ನೀಡಲಾಗುವುದು ಎಂದು ಅವರು ತಿಳಿಸಿದರು.

## ಬಾಲ ಭವನ ಸೊಸೈಟಿ – ಕಲಾ ಬೋಧಕರಿಂದ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 04, (ಕರ್ನಾಟಕ ವಾರ್ತೆ) :

ಬೆಂಗಳೂರು ನಗರದಲ್ಲಿರುವ ಕೇಂದ್ರ ಬಾಲ ಭವನ, ಕಬ್ಬನ್ ಪಾರ್ಕ್ ಹಾಗೂ ಮಿನಿ ಬಾಲ ಭವನಗಳಾದ ಹೆಚ್.ಎಸ್.ಆರ್ ಲೇಔಟ್ – ಹೆಚ್.ಎಸ್.ಆರ್. ಬಡಾವಣೆಯ 4ನೇ ಸೆಕ್ಟರ್(ಹೊಸೂರು ಸರ್ಜಾಪುರ ರಸ್ತೆ), ರಾಜಾಜಿನಗರ – ಮರಿಯಪ್ಪನ ಪಾಳ್ಯ, ಗಾಯತ್ರಿ ದೇವಿ ಪಾರ್ಕ್, ವರಲಕ್ಷ್ಮೀ ನರ್ಸಿಂಗ್ ಹೋಂ ಎದುರು, ಕೋಲ್ಸ್ ಪಾರ್ಕ್ – ಬೆಂಗಳೂರು, ಜೀವನಭೀಮಾನಗರ – 1ನೇ ಡಿ.ಓ.ಎಸ್. ಕಾಲೋನಿ, ಬೆಂಗಳೂರು ಬಾಲಭವನಗಳಲ್ಲಿ ಅಕ್ಟೋಬರ್ – 2021ರ ಮಾಹೆಯಿಂದ ಜನವರಿ – 2022ರ ಮಾಹೆಯವರೆಗೆ 5–16 ವರ್ಷದ ಮಕ್ಕಳಿಗೆ ವಾರಾಂತ್ಯದಲ್ಲಿ ಚಟುವಟಿಕೆಗಳನ್ನು ಏರ್ಪಡಿಸಲು ಉದ್ದೇಶಿಸಲಾಗಿದೆ.

ಚಟುವಟಿಕೆಗಳಲ್ಲಿ ಭಾಗವಹಿಸುವ ಮಕ್ಕಳಿಗೆ ತರಬೇತಿ ನೀಡಲು ನುರಿತ ಅನುಭವಿ ಕಲಾಬೋಧಕರ ಅವಶ್ಯಕತೆ ಇದ್ದು, ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಾದ ಚಿತ್ರಕಲೆ, ಕರಕುಶಲಕಲೆ ಜೇಡಿ ಮಣ್ಣಿನ ಕಲೆ ಯೋಗ, ಕರಾಟೆ, ರಂಗತರಬೇತಿ, ಸಮೂಹಗೀತೆ ಮತ್ತು ನೃತ್ಯ ಇತ್ಯಾದಿ ಕಲಾ ಕ್ಷೇತ್ರಗಳಲ್ಲಿ ಅನುಭವ ಹೊಂದಿರುವ ಅರ್ಹ ಕಲಾಬೋಧಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸಂಬಂಧಿಸಿದ ಮಿನಿ ಬಾಲ ಭವನಗಳ ಪ್ರದೇಶಗಳಲ್ಲಿರುವ ಸ್ಥಳೀಯ ಬೋಧಕರಿಗೆ ಹಾಗೂ ಮಕ್ಕಳ ಕ್ಷೇತ್ರದಲ್ಲಿ ಚಟುವಟಿಕೆ ನಡೆಸಿದ ಅನುಭವ ಹೊಂದಿರುವ ಅಭ್ಯರ್ಥಿಗಳಿಗೆ ಹೆಚ್ಚಿನ ಆದ್ಯತೆ ನೀಲಾಗುವುದು.

ಆಸಕ್ತರು, ತಮ್ಮ ಸ್ವವಿವರಗಳೊಂದಿಗೆ ಸದರಿ ಕ್ಷೇತ್ರದಲ್ಲಿ ಹೊಂದಿರುವ ವಿದ್ಯಾರ್ಹತೆ, ಅನುಭವ ಪ್ರಮಾಣ ಪತ್ರ ಹಾಗೂ ಇತ್ತೀಚಿನ ಒಂದು ಪಾಸ್‌ಪೋರ್ಟ್ ಆಳತೆಯ ಭಾವಚಿತ್ರದೊಂದಿಗೆ ಕಾರ್ಯದರ್ಶಿಗಳು, ಬಾಲ ಭವನ ಸೊಸೈಟಿ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿಗೆ ದಿನಾಂಕ: 07–10–2021ರ ಒಳಗೆ ಸಲ್ಲಿಸುವುದು.

ಹೆಚಿನ ಮಾಹಿತಿಗಾಗಿ ಕಾರ್ಯದರ್ಶಿಗಳು, ಬಾಲಭವನ ಸೊಸೈಟಿ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂ. 080 – 22864189ರ ಮೂಲಕ ಸಂಪರ್ಕಿಸಬಹುದು ಅಥವಾ ಇಮೇಲ್ secybalbhavan.bng@gmail.com ಗೆ ಸಲ್ಲಿ ಪಡೆಯಬಹುದು ಎಂದು ಕಾರ್ಯದರ್ಶಿಗಳು, ಬಾಲಭವನ ಸೊಸೈಟಿ, ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರೆಬಿಕ್ ಮುಖ್ಯ ಪರೀಕ್ಷೆಗಳ ಫಲಿತಾಂಶ ಪ್ರಕಟ

ಬೆಂಗಳೂರು, ಅಕ್ಟೋಬರ್ 04, (ಕರ್ನಾಟಕ ವಾರ್ತೆ) :

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಜುಲೈ – 2021ರ ಮಾಹೆಯಲ್ಲಿ ನಡೆಸಿದ ಅರೇಬಿಕ್ ಮುಖ್ಯ ಪರೀಕ್ಷೆಗಳ ಫಲಿತಾಂಶವನ್ನು ದಿನಾಂಕ: 04–10–2021ರ ಸಂಜೆ 4.00ಗಂಟೆಗೆ ಮಂಡಳಿಯ ಜಾಲತಾಣ https://sslc.karnataka.gov.in ರಲ್ಲಿ ಪ್ರಕಟಿಸಲಾಗಿದೆ. ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಶಾಲಾ / ಕಾಲೇಜುಗಳ ಲಾಗಿನ್‌ನಲ್ಲಿ ಲಭ್ಯ ಮಾಡಲಾಗುವುದು. ಅರೇಬಿಕ್ ಶಾಲಾ / ಕಾಲೇಜುಗಳ ಮುಖ್ಯಸ್ಥರು ದಿನಾಂಕ: 05–10–2021ರಂದು ಫಲಿತಾಂಶವನ್ನು ಆಯಾ ಸಾಲಾ / ಕಾಲೇಜುಗಳಲ್ಲಿ ಪ್ರಕಟಿಸಲು ನಿರ್ದೇಶಕರು, (ಇತರೆ ಪರೀಕ್ಷೆಗಳು), ಕನಾಕಟ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳುರು ಇವರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# Results for Arabic Main Exams

Bengaluru, October 04, (Karnataka Information) :

`The Director (Other Exams), Karnataka Secondary Education Examination Board, Bangaluru is announced the result of the Arabic Main Examination conducted by the Board during July 2021. The results will available in the website https://sslc.karnataka.gov.in dated 04-10-2021, 4.00 PM. The Head Masters / Principals of respective Arabic Schools / Colleges shall announced the results on 05-10-2021. The soft copy of the result sheet will be made available in institute login.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ಅಕ್ಟೋಬರ್ 04, (ಕರ್ನಾಟಕ ವಾರ್ತೆ) :

**ದಿನಾಂಕ: 4.10.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 33 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 84 | ತೃಪ್ತಿಕರ | CO |
| 3 | ಕವಿಕ, ಮೈಸೂರುರಸ್ತೆ | 50 | ಉತ್ತಮ | CO |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 53 | ತೃಪ್ತಿಕರ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 51 | ತೃಪ್ತಿಕರ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 71 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 49 | ಉತ್ತಮ | $PM_{10}$ |
| **(4.10.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | * | * | * |
| 9 | ಪೀಣ್ಯ | * | * | * |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |

| | |
|---|---|
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 4.10.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 33 | Good | $PM_{10}$ |
| 2 | Jayanagar 5th Block, Shalini ground | 84 | Satisfactory | CO |
| 3 | KAVIKA, Mysore Road | 50 | Good | CO |
| 4 | Rajeev Gandhi Institute of Chest Disease, NIMHANS, Hombegowda Nagar | 53 | Satisfactory | CO |
| 5 | HSR Layout, near Central Silkboard | 51 | Satisfactory | CO |
| 6 | City Railway Station, Magestic, Bengaluru | 71 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 49 | Good | $PM_{10}$ |
| **(4.10.2021 at 10.05 AM)** | | | | |
| 8 | BWSSB, Kadabesanahalli | * | * | * |
| 9 | Peenya | * | * | * |
| 10 | BTM Layout | * | * | * |

| Category (Range) | Possible Health Impacts | Category (Range) | Possible Health Impacts |
|---|---|---|---|

| | | | |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |